<u>ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಇವರ</u>

**<u>ನ್ಯಾಯಾಲಯ, ಮೂಡಿಗೆರೆ.</u>**

**<u>ಸಿ.ಸಿ. ಸಂಖ್ಯೆ.244/2025</u>**

| | | | |
|---|---|---|---|
| ಸಾಕ್ಷಿದಾರರ ಹೆಸರು | ಮಂಜುನಾಥ ಎಂ.ಇ | ಸಿ.ಡಬ್ಲ್ಯೂಃ 12 | ಪಿ.ಡಬ್ಲ್ಯೂಃ 4 |
| ತಂದೆಯ ಹೆಸರು | ಲೇಟ್ ಈರಯ್ಯ | | |
| ವಯಸ್ಸು | 56 ವರ್ಷ | | |
| ಉದ್ಯೋಗ | ಎ.ಎಸ್.ಐ, ಗೋಣಿಬೀಡು ಪೊಲೀಸ್ ಠಾಣೆ | | |
| ವಾಸಸ್ಥಳ | ಗೋಣಿಬೀಡು | | |

ದಿನಾಂಕಃ 15.07.2026 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

**<u>ಮುಖ್ಯ ವಿಚಾರಣೆ ಸ.ಸ.ಅ.ರವರಿಂದಃ</u>**

1. ನಾನು ದಿಃ 30.08.2024 ರಿಂದ ಇಂದಿನವರೆಗೂ ಗೋಣಿಬೀಡು ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ ಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

2. ದಿಃ 17.07.2025 ರಂದು ನಾನು ಠಾಣಾ ಎಸ್.ಹೆಚ್.ಓ ಆಗಿ ಕರ್ತವ್ಯ ನಿರ್ವಹಿಸುತ್ತಿರುವಾಗ ಸಂಜೆ 6.20 ರ ಸಮಯದಲ್ಲಿ ಚಾಸಾ.2 ರವರ ಮೂಲಕ ಚಾಸಾ.1 ರವರು ನೀಡಿದ ವರದಿಯನ್ನು ತಂದು ಹಾಜರು ಮಾಡಿದ್ದು, ಸದರಿ ವರದಿಯನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆ 68/2025 ರಂತೆ ಪ್ರಕರಣವನ್ನು ದಾಖಲು ಮಾಡಿರುತ್ತೇನೆ. ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಯು ದೂರನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ.ಪಿ.2 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿ.ಪಿ.2(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ನಿ.ಪಿ.11 ಎಂದು ಸಾಕ್ಷಿಯ ಸಹಿಯನ್ನು ನಿ.ಪಿ.11(ಎ) ಎಂದು ಗುರುತಿಸಲಾಯಿತು. ನಂತರ ಈ ಕೇಸಿನ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ.13 ರವರಿಗೆ ವಹಿಸಿಕೊಟ್ಟಿರುತ್ತೇನೆ.

<u>ಪಾಟೀ ಸವಾಲು ಶ್ರೀ ಎಸ್.ಡಿ ವಕೀಲರಿಂದ – ಆರೋಪಿತನ ಪರವಾಗಿ</u>

3. ಚಾಸಾ.1 ರವರು ನನ್ನ ಮೇಲಾಧಿಕಾರಿಗಳು ಆಗಿರುವುದರಿಂದ ಅವರ ಮಾತನ್ನು ಕೇಳಿ ಸುಳ್ಳು ಪ್ರಕರಣವನ್ನು ದಾಖಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ:</u>** ಇಲ್ಲ

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.

ಸಾಕ್ಷಿಯ ಸಹಿ

ಮಾ